ಶ್ರೀ ಪಿ.ಸಿ ಸಿದ್ದನಗೌಡರು(ಸಕ್ಕರೆ, ಜವಳಿ, ವಿಜ್ಞಾನ ಮತ್ತು ತಂತ್ರಜ್ಞಾನ, ಪರಿಸರ ಮತ್ತು ಜೀವಿಶಾಸ್ತ್ರ ರಾಜ್ಯ ಸಚಿವರು) :

ಅ) ನಿಜ.

ಆ) ಆಡಳಿತ ಮಂಡಳಿಯನ್ನು ರದ್ದುಪಡಿಸಿ ಜಿಲ್ಲಾಧಿಕಾರಿಯವರನ್ನು ವಿಶೇಷಾಧಿಕಾರಿಗಳನ್ನಾಗಿ ನೇಮಿಸಲಾಗಿದೆ. ಕರ್ನಾಟಕ ಸಹಕಾರ ಸಂಘಗಳ ಕಾಯ್ದೆಗೆ ಕಲಂ ೬೪ರ ಪ್ರಕಾರ ವಿಚಾರಣೆಗೆ ಆದೇಶ ಮಾಡಲಾಗಿತ್ತು. ವಿಚಾರಣಾಧಿಕಾರಿಯವರು ವರದಿಯನ್ನು ಸಲ್ಲಿಸಿರುತ್ತಾರೆ. ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ ೬೪ರ ರೀತ್ಯಾ ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು ಆದೇಶ ಹೊರಡಿಸಿ, ವಿಚಾರಣಾ ವರದಿಯಲ್ಲಿರುವ ನ್ಯೂನತೆಗಳಿಗೆ ಸಂಬಂಧಿಸಿದಂತೆ ಕಾನೂನು ರೀತ್ಯಾ ಕ್ರಮ ಜರುಗಿಸಬೇಕೆಂದು ಕಾರ್ಖಾನೆಗೆ ಆದೇಶ ನೀಡಿರುತ್ತಾರೆ.

ಇ) ೧೯೯೪-೯೫ರ ಸಾಲಿನಲ್ಲಿ ೨,೧೫,೦೩೮, ಮೆ.ಟನ್ ಕಬ್ಬನ್ನು ನುರಿಸಿರುತ್ತದೆ.

ಈ) ಆರಂಭಿಸುವುದು.

ಕಾರವಾರ ಒಳಚರಂಡಿ ಯೋಜನೆಯ ಅಂದಾಜು ವೆಚ್ಚ

127 - ಶ್ರೀ ವಸಂತ ಅನ್ನೋಟಿಕಾರ (ಕಾರವಾರ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಾರವಾರ ಒಳಚರಂಡಿ ಯೋಜನೆಯನ್ನು ಸರ್ಕಾರದವರು ತಯಾರಿಸಿದ್ದಾರೆಯೇ

ಆ) ಹಾಗಿದ್ದಲ್ಲಿ ಅದರ ಅಂದಾಜು ವೆಚ್ಚ ಎಷ್ಟು

ಇ) ಈ ಯೋಜನೆಗೆ ತಾಂತ್ರಿಕ ಮಂಜೂರಾತಿ ನೀಡಿದೆಯೇ?

ಈ) ನೀಡಿದ್ದಲ್ಲಿ ಕೆಲಸವನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ವೈಜನಾಥ್ ಪಾಟೀಲ್ (ನಗರಾಭಿವೃದ್ಧಿ ಸಚಿವರು) :

ಅ) ತಯಾರಿಸಲಾಗಿದೆ.

ಆ) ೩೬೧೩.೦೦ ರೂಪಾಯಿಗಳು

ಇ) ಇಲ್ಲ

ಈ) ಉದ್ಭವಿಸುವುದಿಲ್ಲ.

ಭೀಮಾ ಬ್ಯಾರೇಜ್ ಕಮ್ ಬ್ರಿಡ್ಜ್ ಕಾರ್ಯಸ್ಥಗಿತ

೧೩೦ - ಶ್ರೀ ಮಾಲೀಕಯ್ಯ ವಿ. ಗುತ್ತೇದಾರ (ಅಫಜಲ್‌ಪುರ) : ಮಾನ್ಯ ನಗರಾಭಿವೃದ್ಧಿ, ಕಾಡಾ ಮತ್ತು ಹೈದರಾಬಾದ್ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?